ಶ್ರೀ ಡಿ ಮಂಜುನಾಥ (ಉನ್ನತ ಶಿಕ್ಷಣ ಸಚಿವರು)

ಅ) ಒಟ್ಟು 9 97 ಎಕರೆ

ಆ) ಇದರಲ್ಲಿ ಒಟ್ಟು 943 ಚದರ್ ಮೀಟರಿನಷ್ಟು ಕಾಲೇಜು ಕಟ್ಟಡವಿರುತ್ತದೆ ಹಾಗೂ 90X20 ಮೀಟರ್ ಅಳತೆಯಲ್ಲಿ ಆಟದ ಮೈದಾನವಿರುತ್ತದೆ

ಇ) ಹೌದು ಆದರೆ, ಕಾಲೇಜು ಶಿಕ್ಷಣ ಇಲಾಖೆಯ ಕಟ್ಟಡಗಳಿಗಾಗಿ ಪ್ರಸ್ತುತ ದೊರೆಯುತ್ತಿರುವ ಅನುದಾನ ಕಡಿಮೆ ಇರುವುದರಿಂದ ಕಾಂಪೌಂಡ್ ನಿರ್ಮಾಣ ಸಾಧ್ಯವಾಗಿಲ್ಲ ಇದಲ್ಲದೆ ಮೊದಲನೆಯ ಆದ್ಯತೆಯಾಗಿ ವಿದ್ಯಾರ್ಥಿಗಳ ಬೋಧನಾ ಕೊರಡಿಗಳ ನಿರ್ಮಾಣಕ್ಕಾಗಿ ಗಮನಹರಿಸಲಾಗುತ್ತಿದೆ ಮುಂದೆ ಹೆಚ್ಚುವರಿ ಅನುದಾನ ದೊರೆತಲ್ಲಿ ಕಾಂಪೌಂಡ್ ನಿರ್ಮಿಸುವ ಸಂಬಂಧ ಕ್ರಮ ಜರುಗಿಸಲಾಗುವುದು

ಈ) ಈ ಕಾಲೇಜಿನಲ್ಲಿ ಬೋಧಕ ಸಿಬ್ಬಂದಿ ವರ್ಗದ ಕೊರತೆ ಇರುವುದಿಲ್ಲ ಹೀಗಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ

ಉ) ಪ್ರಸ್ತಕ ಸಾಲಿನಲ್ಲಿ ಹೆಚ್ಚುವರಿಯಾಗಿ ಅನುದಾನ ದೊರೆತಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುವುದು

503(558) ಶ್ರೀ ಪ್ರಕಾಶ್ ಖಂಡ್ರೆ (ಬಾಲ್ಕಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೀದರ್ ಜಿಲ್ಲೆಯ ಭಾಲ್ಕಿ ಕ್ಷೇತ್ರದಲ್ಲಿ ಹೊಸ ಪಶು ವೈದ್ಯಶಾಲೆಗಳನ್ನು ಸ್ಥಾಪಿಸುವ ಸಲುವಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆಯೇ?

ಆ) ಹೊಸ ಪಶು ವೈದ್ಯಕೀಯ ಆಸ್ಪತ್ರೆಗಳನ್ನು ಯಾವಾಗ ಪ್ರಾರಂಭ ಮಾಡಲಾಗುವುದು

ಇ) ಅನೇಕ ಗ್ರಾಮಗಳಲ್ಲಿ ಪಶು ವೈದ್ಯಕೀಯ ಸೌಲಭ್ಯ ಸಿಗದೆ ಇರುವುದರಿಂದ ಬಡ ರೈತರು ತೊಂದರೆ ಪಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ರಾಜ್ಯದಲ್ಲಿ ಯಾವುದೇ ಹೊಸ ಪಶುವೈದ್ಯಕೀಯ ಸಂಸ್ಥೆಯನ್ನು ಪ್ರಾರಂಭಿಸುವ ಕಾರ್ಯಕ್ರಮ ಸದ್ಯ ಇರುವುದಿಲ್ಲ

ಆ) ಉದ್ಭವಿಸುವುದಿಲ್ಲ

ಇ) ಇಲ್ಲ

ಪಶುವೈದ್ಯಕೀಯ ಸೇವೆಯನ್ನು ಹಾಲಿ ಇರುವ ಪಶುವೈದ್ಯಕೀಯ ಸಂಸ್ಥೆಗಳಿಂದ ಒದಗಿಸಲಾಗುತ್ತಿದೆ

504(715) ಶ್ರೀ ಪ್ರಕಾಶ್ ಖಂಡ್ರೆ (ಬಾಲ್ಕಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೀದರ್ ಜಿಲ್ಲೆಯಲ್ಲಿ ಅಕ್ಕಪಕ್ಕದ ರಾಜ್ಯಗಳಿಂದ (ಆಂಧ್ರ ಮಹಾರಾಷ್ಟ್ರ) ಬಂದ ನಕಲಿ ಹಾಲಿನ ಪ್ಯಾಕೇಟ್‌ಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ

ಆ) ಬಂದಿದ್ದಲ್ಲಿ, ಅಂತಹವರುಗಳ ಮೇಲೆ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ

ಇ) ನಕಲಿ ಹಾಲಿನ ಮಾರಾಟದಿಂದ ಜಿಲ್ಲೆಯ ಸಾರ್ವಜನಿಕರಿಗೆ ಹಾನಿಯಾಗುತ್ತಿರುವ ಬಗ್ಗೆ ಸರ್ಕಾರ ಯಾವ ಕ್ರಮವನ್ನು ಕೈಗೊಳ್ಳುವುದು?